**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

**ಇ-ಮೇಲ್:commissioner.pue@gmail.com ಸ್ಥಿರ ದೂರವಾಣಿ ಸಂ:080-23562033**

ಸಂಖ್ಯೆ:DPUE-ACA0OTH/388/2025 1968510) ದಿನಾಂಕ:20-06-2026

**ಸುತ್ತೋಲೆ**

**ವಿಷಯ:** 2026-27ನೇ ಸಾಲಿಗೆ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಣೆ ಮಾಡುವ ಕುರಿತು.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಇಪಿ 105 ಎಂಪಿಇ 2024 ದಿನಾಂಕ:29.01.2026.

-*-

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2026-27ನೇ ಸಾಲಿಗೆ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸುವ ಕಾರ್ಯ ನಡೆಸಲಾಗುತ್ತಿದೆ.

ಈಗಾಗಲೇ, ಪಠ್ಯಪುಸ್ತಕಗಳ ವಿತರಣಾ ಕಾರ್ಯ ಪ್ರಗತಿಯಲ್ಲಿದ್ದು ಇನ್ನೊಂದು ವಾರದಲ್ಲಿ ಎಲ್ಲಾ ಮುದ್ರಿತ ಪಠ್ಯಪುಸ್ತಕಗಳು ತಾಲ್ಲೂಕು ನೋಡಲ್ ಕೇಂದ್ರಗಳಿಗೆ ಸರಬರಾಜಾಗುತ್ತವೆ. ಆಯಾ ತಾಲ್ಲೂಕು ವ್ಯಾಪ್ತಿಯಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 2025-26ನೇ ಸಾಲಿನಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆಯನ್ನು ಆಧರಿಸಿ ಪಠ್ಯಪುಸ್ತಕಗಳನ್ನು ಮುದ್ರಿಸಲಾಗಿದೆ.

**ಕೆಲವು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಕಳೆದ ಶೈಕ್ಷಣಿಕ ವರ್ಷಕ್ಕೆ ಹೋಲಿಸಿದರೆ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಾಖಲಾತಿ ಹೆಚ್ಚಾಗಿರಬಹುದು. ಅಂತಹ ಸಂದರ್ಭಗಳಲ್ಲಿ, ಕಳೆದ ಸಾಲಿನ ದಾಖಲಾತಿ ಸಂಖ್ಯೆಗೆ ಸೀಮಿತವಾಗಿ ತಾಲ್ಲೂಕು ನೋಡಲ್ ಕೇಂದ್ರಗಳಿಂದ ಪಠ್ಯಪುಸ್ತಕಗಳನ್ನು ವಿತರಿಸತಕ್ಕದ್ದು.**

**ಹಾಗೆಯೇ, ಕೆಲವು ಸರ್ಕಾರಿ ಪದವಿಪೂರ್ವ ಕಾಲೇಜುಗಳ ನಿರ್ದಿಷ್ಟ ಸಂಯೋಜನೆಗಳಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ದಾಖಲಾತಿ ಕಳೆದ ಸಾಲಿಗಿಂತ ಕಡಿಮೆಯಾಗಿರಬಹುದು. ಅಂತಹ ಸಂದರ್ಭಗಳಲ್ಲಿ, ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಮಾತ್ರ ಪಠ್ಯಪುಸ್ತಕಗಳನ್ನು ವಿತರಿಸತಕ್ಕದ್ದು. ಹೆಚ್ಚುವರಿಯಾಗಿ ಉಳಿಯಲಿರುವ ಪಠ್ಯಪುಸ್ತಕಗಳನ್ನು ತಾಲ್ಲೂಕು ನೋಡಲ್ ಕೇಂದ್ರದಲ್ಲಿಯೇ ದಾಸ್ತಾನು ಶೇಖರಿಸಿಟ್ಟುಕೊಳ್ಳತಕ್ಕದ್ದು. ಈ ಸಂಬಂಧ ಮುಂದಿನ ಸೂಚನೆಗಳನ್ನು ಇಲಾಖೆಯ ವತಿಯಿಂದ ಪ್ರತ್ಯೇಕವಾಗಿ ನೀಡಲಾಗುವುದು.**

ಐಚ್ಛಿಕ ವಿಷಯಗಳ (Core Subjects) ಕನ್ನಡ ಮತ್ತು ಆಂಗ್ಲ ಮಾಧ್ಯಮದ ಪಠ್ಯಪುಸ್ತಕಗಳ ಸಂಖ್ಯೆಯನ್ನು ಆಯಾ ಕಾಲೇಜುಗಳ ಪ್ರಾಂಶುಪಾಲರಿಂದಲೇ G-Staff ಮೂಲಕ ಪಡೆಯಲಾಗಿತ್ತು. ಸದರಿ ಬೇಡಿಕೆಯ ಸಂಖ್ಯೆಗೆ ಅನುಗುಣವಾಗಿ ಮಾಧ್ಯಮವಾರು ಪುಸ್ತಕಗಳನ್ನು ವಿತರಣೆ ಮಾಡುವುದು. ಈ ಸಂಬಂಧ ಕಾಲೇಜುಗಳಿಗೆ ವಿತರಿಸುವ ಪಠ್ಯಪುಸ್ತಕಗಳ ಸಂಖ್ಯೆಯನ್ನು ಸೂಕ್ತ ರೀತಿಯಲ್ಲಿ ವಿತರಣಾ ವಹಿಯನ್ನು (Distribution Register) ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.

**ಈಗಾಗಲೇ ತಾಲ್ಲೂಕು ನೋಡಲ್ ಕೇಂದ್ರಗಳಿಗೆ ತಲುಪಿರುವ ಪಠ್ಯಪುಸ್ತಕಗಳನ್ನು ತಮ್ಮ ನೋಡಲ್ ಕೇಂದ್ರದ ವ್ಯಾಪ್ತಿಯಲ್ಲಿರುವ ಎಲ್ಲಾ ಸರ್ಕಾರಿ ಪದವಿಪೂರ್ವ ಕಾಲೇಜುಗಳಿಗೆ ಆದ್ಯತೆಯ ಮೇರೆಗೆ ತ್ವರಿತವಾಗಿ ವಿತರಿಸಲು ಕ್ರಮ ಕೈಗೊಳ್ಳತಕ್ಕದ್ದು. ಸದರಿ ವಿತರಣೆಗೆ ಸಂಬಂಧಿಸಿದ ವಿತರಣಾವಹಿಯನ್ನು ಶೀರ್ಷಿಕೆವಾರು ನೋಡಲ್ ಕೇಂದ್ರದ ಅಧಿಕಾರಿಗಳು ಕಡ್ಡಾಯವಾಗಿ ನಿರ್ವಹಿಸತಕ್ಕದ್ದು. ನೋಡಲ್ ಕೇಂದ್ರಗಳಿಂದ ಪಡೆದ ಪಠ್ಯಪುಸ್ತಕಗಳನ್ನು ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ವಿತರಿಸತಕ್ಕದ್ದು ಹಾಗೂ ವಿತರಣಾ ವಹಿಯನ್ನು ನಿರ್ವಹಿಸಲು ಸೂಚಿಸಿದೆ.**

ಈ ಎಲ್ಲಾ ಮಾಹಿತಿಗಳನ್ನು, ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ ಮತ್ತು ಪ್ರಾಂಶುಪಾಲರಿಗೆ ತಿಳಿಸಿ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದೆ.

Digitally signed by
BHARATH
Date: 20-06-2026
10:32:15

ನಿರ್ದೇಶಕರು,

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)

**ಇವರಿಗೆ:**

1. ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ - ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ತಾಲ್ಲೂಕು ನೋಡಲ್ ಅಧಿಕಾರಿಗಳಿಗೆ - ಜಿಲ್ಲಾ ಉಪ ನಿರ್ದೇಶಕರ ಮೂಲಕ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ-ಜಿಲ್ಲಾ ಉಪ ನಿರ್ದೇಶಕರ ಮೂಲಕ ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳನ್ನು:**

1. ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕೆ.ಆರ್. ವೃತ್ತ,ಬೆಂಗಳೂರು-01.
2. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ,6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003.- ಮಾಹಿತಿಗಾಗಿ.
3. ಕಚೇರಿ ಪ್ರತಿ.